ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಸಾ&ಅ:ವಾ.ಕಾ.ಕ:2021–22 | 1150 ದಿನಾಂಕ:18.08.2021

: ಸುತ್ತೋಲೆ :

ವಿಷಯ: ಆಗಸ್ಟ್–20, 2021ರ ಶುಕ್ರವಾರದಂದು "ಸದ್ಭಾವನಾ ದಿನ"ವನ್ನು ಆಚರಿಸುವ ಕುರಿತು.

ಉಲ್ಲೇಖ: 1. ಸಂಖ್ಯೆ:ಸಿಆಸುಇ 08 ಹೆಚ್‌ಸಿ ಆರ್ 2021 ಬೆಂಗಳೂರು 11.08.2021
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:17.08.2021

*****

ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ರಾಜ್ಯದ ಎಲ್ಲಾ ಧರ್ಮ, ಭಾಷೆಗಳ ಜನರಲ್ಲಿ ರಾಷ್ಟ್ರೀಯ ಏಕೀಕರಣ, ಕೋಮು ಸೌಹಾರ್ದತೆಯನ್ನು ಉತ್ತೇಜಿಸಿ, ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಪ್ರತಿ ವರ್ಷ ಆಗಸ್ಟ್ –20 ರಂದು "ಸದ್ಭಾವನಾ ದಿನ"ವನ್ನು ಆಚರಿಸಲಾಗುತ್ತಿದೆ. ಅದರಂತೆ ಈ ವರ್ಷ ದಿನಾಂಕ 20.08.2021ರ ಶುಕ್ರವಾರದಂದು "ಸದ್ಭಾವನಾ ದಿನ"ವನ್ನಾಗಿ ರಾಜ್ಯಾದಾದ್ಯಂತ ಆಚರಿಸಬೇಕೆಂದು ಮತ್ತು ಪ್ರತಿಜ್ಞೆಯನ್ನು ಸ್ವೀಕರಿಸುವಂತೆ ಸರ್ಕಾರವು ಸೂಚಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳಲ್ಲಿ ಆಗಸ್ಟ್–20, 2021ರ ಶುಕ್ರವಾರದಂದು "ಸದ್ಭಾವನಾ ದಿನ"ವನ್ನು ಆಚರಿಸುವುದರೊಂದಿಗೆ ಪ್ರತಿಜ್ಞೆಯನ್ನು ಸ್ವೀಕರಿಸಬೇಕೆಂದು ಈ ಮೂಲಕ ತಿಳಿಸಲಾಗಿದ್ದು, "ಸದ್ಭಾವನಾ ದಿನ" ಕಾರ್ಯಕ್ರಮವನ್ನು ನಡೆಸಿರುವ ಬಗ್ಗೆ ನೇರವಾಗಿ ಸರ್ಕಾರಕ್ಕೆ ಅನುಪಾಲನಾ ವರದಿಯನ್ನು ಸಲ್ಲಿಸುವಂತೆ ತಿಳಿಸಲಾಗಿದೆ.

ಆದೇಶದ ಮೇರೆಗೆ
18/08/21
ಉಪಕುಲಸಚಿವರು
ಉಪಕುಲಸಚಿವರು
ಸಾಮಾನ್ಯ ಮತ್ತು ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾಲಯ
ತುಮಕೂರು

ಅಡಕ: "ಸದ್ಭಾವನಾ ದಿನಾಚರಣೆಯ" ಪ್ರತಿಜ್ಞಾ ಪ್ರತಿ.

ಗೆ,

ಪ್ರಾಂಶುಪಾಲರು, ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು

1. ಸಿಸ್ಟಂ ಅನಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.(ವಿವಿ ಜಾಲತಾಣದಲ್ಲಿ ಪ್ರದರ್ಶಿಸಲು ಹಾಗೂ **ಎಲ್ಲಾ ಕಾಲೇಜುಗಳಿಗೆ ಇಂದೇ ಇ– ಮೇಲ್ ಕಳಿಹಿಸಲು ಸೂಚಿಸಿದೆ).**
2. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಕಚೇರಿ ಪ್ರತಿ

ಸಿಆರ್

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಸಿಆಸುಇ 08 ಹೆಚ್‌ಸಿಆರ್ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:11-08-2021.

<u>ಸುತ್ತೋಲೆ</u>

ವಿಷಯ:- ಆಗಸ್ಟ್-20, 2021ರ ಶುಕ್ರವಾರದಂದು "ಸದ್ಭಾವನಾ ದಿನ" ವನ್ನು ಆಚರಿಸುವ ಬಗ್ಗೆ

*****

ರಾಜ್ಯದ ಎಲ್ಲಾ ಧರ್ಮ, ಭಾಷೆಗಳ ಜನರಲ್ಲಿ ರಾಷ್ಟ್ರೀಯ ಏಕೀಕರಣ, ಕೋಮು ಸೌಹಾರ್ದತೆಯನ್ನು ಉತ್ತೇಜಿಸಿ, ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಪ್ರತಿ ವರ್ಷ ಆಗಸ್ಟ್-20 ರಂದು <u>"ಸದ್ಭಾವನಾ ದಿನ"</u>ವನ್ನು ಆಚರಿಸಲಾಗುತ್ತಿದೆ. ಅದರಂತೆ ಈ ವರ್ಷ ದಿನಾಂಕ:20.08.2021ರ ಶುಕ್ರವಾರದಂದು "ಸದ್ಭಾವನಾ ದಿನ"ವನ್ನಾಗಿ ರಾಜ್ಯದಾದ್ಯಂತ ಆಚರಿಸಬೇಕೆಂದು ಸರ್ಕಾರವು ನಿರ್ಧರಿಸಿದೆ. "ಸದ್ಭಾವನಾ ದಿನಾಚರಣೆ"ಯ ಪ್ರತಿಜ್ಞೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಈ ಸಂಬಂಧವಾಗಿ ಭಾರತ ಸ್ಕೌಟ್ಸ್ ಆಂಡ್ ಗೈಡ್ಸ್ ಮತ್ತು ಯೂತ್ ಅಸೋಸಿಯೇಷನ್ ಸಹಕಾರದೊಂದಿಗೆ ರಾಜ್ಯದ ವಿಭಾಗ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಕಾರ್ಯಕ್ರಮವನ್ನು ಏರ್ಪಡಿಸಿ "ಸದ್ಭಾವನಾ ದಿನ" ವನ್ನು ಆಚರಿಸುವುದರೊಂದಿಗೆ ಪ್ರತಿಜ್ಞೆಯನ್ನು ಸ್ವೀಕರಿಸಬೇಕೆಂದು ಸೂಚಿಸಲಾಗಿದೆ. ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾನಿಲಯಗಳ ಅಧೀನದಲ್ಲಿರುವ ಕಾಲೇಜುಗಳು ಮತ್ತು ಎಲ್ಲಾ ಶಾಲೆಗಳಲ್ಲಿ ದಿನಾಂಕ:20.08.2021ರಂದು ಸದ್ಭಾವನಾ ದಿನಾಚರಣೆಯನ್ನು ಆಚರಿಸಬೇಕೆಂದು ಸಂಬಂಧಪಟ್ಟವರಿಗೆ ಸೂಕ್ತ ಸೂಚನೆಗಳನ್ನು ನೀಡತಕ್ಕದ್ದು.

ಈ ಕಾರ್ಯಕ್ರಮವನ್ನು ನಡೆಸಿರುವ ಬಗ್ಗೆ ಸರ್ಕಾರಕ್ಕೆ ಒಂದು ಅನುಪಾಲನಾ ವರದಿಯನ್ನು ಕಳುಹಿಸಬೇಕೆಂದು ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಆಯಾ ಇಲಾಖೆಯ ಮುಖ್ಯಸ್ಥರಿಗೆ ಸೂಚಿಸಲಾಗಿದೆ.

ಎಂ.ಎಂ. 11/8/21
(ಎಂ.ಎಂ. ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ರಾಜಕೀಯ)

ಇವರಿಗೆ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
2. ಸ್ಥಾನಿಕ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
3. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
5. ಎಲ್ಲಾ ವಿಶ್ವವಿದ್ಯಾನಿಲಯಗಳ ಕುಲಸಚಿವರುಗಳು.

ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆ

ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲ ಬೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಪ್ರತಿಜ್ಞೆ ಮಾಡುತ್ತೇನೆ.